**All India Radio: Bangalore**
**National Bulletin In Kannada**
**03.05.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.05.2025 1.10 p.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಂಗೋಲಾ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಸಾಲ್ವೆಸ್ ಲೂರೆಂಕೊ ನಿಯೋಗ ಮಟ್ಟದ ಮಾತುಕತೆ
2. ವೇವ್ಸ್ ಶೃಂಗಸಭೆ-೨೦೨೫; ಐಐಸಿಟಿಯೊಂದಿಗೆ ೭ ಜಾಗತಿಕ ಸಂಸ್ಥೆಗಳು ತಿಳಿವಳಿಕಾ ಒಪ್ಪಂದಕ್ಕೆ ಸಹಿ
3. ಪಾಕಿಸ್ತಾನದಿಂದ ನೇರ ಪರೋಕ್ಷ ಆಮದಿಗೆ ಭಾರತದ ನಿರ್ಬಂಧ
4. ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ - ೨೦೨೫ರ ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನ; ಜುಲೈ ೩೧ ಕೊನೆಯ ದಿನ
5. ಐಪಿಎಲ್ ಟಿ-೨೦ ಕ್ರಿಕೆಟ್; ಬೆಂಗಳೂರಿನಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

<><><><>

ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಂಗೋಲಾ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಸಾಲ್ವೆಸ್ ಲೂರೆಂಕೊ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ಮಾತುಕತೆಯ ನಂತರ ಎರಡೂ ದೇಶಗಳ ನಡುವೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸಲು ಹಲವಾರು ಒಪ್ಪಂದಗಳಿಗೆ ಸಹಿ ಹಾಕಿದರು. ಅಂಗೋಲಾದ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಸಾಲ್ವೆಸ್ ಲೂರೆಂಕೊ ಅವರಿಗೆ ಇಂದು ಬೆಳಿಗ್ಗೆ ರಾಷ್ಟ್ರಪತಿ ಭವನದ ಮುಂಭಾಗದಲ್ಲಿ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಈ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅಂಗೋಲಾದ ಅಧ್ಯಕ್ಷರನ್ನು ಸ್ವಾಗತಿಸಿದರು. ಅಧ್ಯಕ್ಷ ಲೂರೆಂಕೊ ರಾಜ್‌ಘಾಟ್‌ನಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿಜಿಯವರಿಗೆ ಗೌರವ ನಮನ

ಸಲ್ಲಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅಧ್ಯಕ್ಷ ಲೊರೆಂಕೊ, ೩೮ ವರ್ಷಗಳಲ್ಲಿ ಮೊದಲನೇ ಬಾರಿ ಕೈಗೊಂಡಿರುವ ಈ ಭಾರತ ಭೇಟಿ, ಉಭಯ ರಾಷ್ಟ್ರಗಳಿಗೆ ವಿಶೇಷವಾಗಿ ಅಂಗೋಲಾಗೆ ಮಹತ್ವದ ಕ್ಷಣವಾಗಿದೆ. ಉಭಯ ರಾಷ್ಟ್ರಗಳ ನಡುವಿನ ಸ್ನೇಹ ಮತ್ತು ಸಹಕಾರ ಸಂಬಂಧ ಬಲಪಡಿಸುವ ನಿಟ್ಟಿನಲ್ಲಿ ಈ ಭೇಟಿ ಮಹತ್ವ ಪಡೆದಿದೆ ಎಂದಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಅಧ್ಯಕ್ಷ ಲಾರೆಂಕೊ ಮಾತುಕತೆ ನಡೆಸುವ ಕಾರ್ಯಕ್ರಮವಿದೆ. ಭೇಟಿ ನೀಡುವ ಗಣ್ಯರ ಗೌರವಾರ್ಥ ರಾಷ್ಟ್ರಪತಿ ದ್ರೌಪದಿ ಮುರ್ಮು ಔತಣಕೂಟ ಆಯೋಜಿಸಲಿದ್ದಾರೆ. ಈ ವರ್ಷ ಭಾರತ ಮತ್ತು ಅಂಗೋಲಾ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೪೦ ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ಸಮಯದಲ್ಲಿ ಅವರ ಈ ಭೇಟಿ ಮಹತ್ವ ಪಡೆದಿದೆ. ಅಂಗೋಲಾ ಅಧ್ಯಕ್ಷರು ಭಾರತಕ್ಕೆ ಮೂರು ದಿನಗಳ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದರು. ಅವರೊಂದಿಗೆ ಹಲವಾರು ಸಚಿವರು, ಹಿರಿಯ ಅಧಿಕಾರಿಗಳು, ವ್ಯಾಪಾರ ಸಂಸ್ಥೆಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗವೂ ಆಗಮಿಸಿದೆ. ನಾಳೆ, ಅಧ್ಯಕ್ಷ ಲಾರೆಂಕೊ ನವದೆಹಲಿಯಲ್ಲಿ ನಡೆಯಲಿರುವ ವ್ಯಾಪಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ಇದು ಎರಡೂ ದೇಶಗಳ ನಡುವಿನ ಹೂಡಿಕೆ ಮತ್ತು ವಾಣಿಜ್ಯ ಸಂಪರ್ಕಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ೨೦೨೩-೨೦೨೪ರ ಅವಧಿಯಲ್ಲಿ ಭಾರತ-ಅಂಗೋಲಾ ನಡುವಿನ ದ್ವಿಪಕ್ಷೀಯ ವ್ಯಾಪಾರ ೪.೧೯೨ ಶತಕೋಟಿ ಡಾಲರ್ ತಲುಪಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಅಭಿವೃದ್ಧಿ ಪಾಲುದಾರಿಕೆ, ಸಾಮರ್ಥ್ಯ-ನಿರ್ಮಾಣ ಸಹಕಾರ ಮತ್ತು ರಕ್ಷಣಾ ಸಂಬಂಧಗಳು ಸಹ ವಿಸ್ತರಿಸುತ್ತಿವೆ. ವಿಶ್ವಸಂಸ್ಥೆ ಸೇರಿದಂತೆ ವಿವಿಧ ಬಹುಪಕ್ಷೀಯ ವೇದಿಕೆಗಳಲ್ಲಿ ಎರಡೂ ದೇಶಗಳು ಪರಸ್ಪರ ಉಮೇದುವಾರಿಕೆಯನ್ನು ಬೆಂಬಲಿಸುತ್ತವೆ.

<><><><>

ಮಾಧ್ಯಮ ಮತ್ತು ಮನರಂಜನೆ ಕ್ಷೇತ್ರದಲ್ಲಿ ಭಾರತ ಜಾಗತಿಕ ನಾಯಕತ್ವದ ಸ್ಥಾನ ವಹಿಸಿಕೊಳ್ಳಬಹುದು ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಮುಂಬೈನಲ್ಲಿ ನಡೆಯುತ್ತಿರುವ ವೇವ್ಸ್ ಶೃಂಗಸಭೆಯ ಸಂದರ್ಭದಲ್ಲಿ ಗೂಗಲ್ ಮೆಟಾ ಮತ್ತು ಮೈಕ್ರೋಸಾಫ್ಟ್ ಸೇರಿದಂತೆ ೭ ಜಾಗತಿಕ ಸಂಸ್ಥೆಗಳು ಇಂದು ಭಾರತೀಯ ಸೃಜನಶೀಲ ತಂತ್ರಜ್ಞಾನ ಸಂಸ್ಥೆ - ಐಐಸಿಟಿಯೊಂದಿಗೆ ತಿಳಿವಳಿಕಾ ಒಪ್ಪಂದಕ್ಕೆ ಸಹಿ ಹಾಕಿದೆ. ಮುಂಬೈನಲ್ಲಿ

೪೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಐಐಸಿಟಿ ಸ್ಥಾಪಿಸಲಾಗುವುದು. ಇದೇ ಸಂದರ್ಭದಲ್ಲಿ ಮಾತನಾಡಿದ ಅಶ್ವಿನಿ ವೈಷ್ಣವ್, ಮುಂಬರುವ ದಿನಗಳಲ್ಲಿ ಮುಂಬೈನಲ್ಲಿ ಸ್ಥಾಪನೆಯಾಗಲಿರುವ ಐಐಸಿಟಿ, ಐಐಎಂ ಮತ್ತು ಐಐಟಿಯಂತಹ ಸಂಸ್ಥೆಯಾಗಿ ರೂಪುಗೊಳ್ಳಲಿದೆ ಎಂದರು.

********ಧ್ವನಿ *** ಅಶ್ವಿನಿ ವೈಷ್ಣವ್

<><><><>

ಮುಂಬೈನಲ್ಲಿ ನಡೆಯುತ್ತಿರುವ ವಿಶ್ವ ಆಡಿಯೋ ದೃಶ್ಯ ಮತ್ತು ಮನರಂಜನಾ ಶೃಂಗಸಭೆ ವೇವ್ಸ್-೨೦೨೫ ರ ಮೂರನೇ ದಿನವಾದ ಇಂದು ಸಮುದಾಯ ರೇಡಿಯೋ ಕುರಿತ ರಾಷ್ಟ್ರೀಯ ಸಮ್ಮೇಳನ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ನಡೆಯುವ ಚರ್ಚೆಗಳು ಜನರನ್ನು ಸಬಲೀಕರಣಗೊಳಿಸುವ ಮತ್ತು ಸ್ಥಳೀಯ ಸಮುದಾಯದೊಂದಿಗೆ ಹೆಚ್ಚು ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಇತ್ತೀಚಿನ ನೀತಿಗಳು ಮತ್ತು ಕಾರ್ಯಕ್ರಮಗಳ ಮೇಲೆ ಕೇಂದ್ರೀಕರಿಸುತ್ತವೆ. ಸಮುದಾಯ ರೇಡಿಯೋ ಕೇಂದ್ರಗಳು ಸಂಪರ್ಕ ಸಾಧಿಸಲು ಮತ್ತು ಉತ್ತಮ ಅಭ್ಯಾಸಗಳನ್ನು ಹಂಚಿಕೊಳ್ಳಲು ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಭಾರತೀಯ ಸಮೂಹ ಸಂವಹನ ಸಂಸ್ಥೆ ಸಹಯೋಗದೊಂದಿಗೆ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಈ ಕಾರ್ಯಕ್ರಮವನ್ನು ಆಯೋಜಿಸುತ್ತಿದೆ. ಏತನ್ಮಧ್ಯೆ, ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಎಲ್. ಮುರುಗನ್ ಇಂದು ಶೃಂಗಸಭೆಯಲ್ಲಿ "ಭಾರತದ ನೇರ ಪ್ರಸಾರ ಕಾರ್ಯಕ್ರಮಗಳ ಆರ್ಥಿಕತೆ: ಒಂದು ಕಾರ್ಯತಂತ್ರದ ಬೆಳವಣಿಗೆಯ ಅಗತ್ಯತೆ" ಎಂಬ ಶೀರ್ಷಿಕೆಯ ಶ್ವೇತಪತ್ರವನ್ನು ಅನಾವರಣಗೊಳಿಸಲಿದ್ದಾರೆ.

<><><><>

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯು ಮುಂಬೈನಲ್ಲಿಂದು ನಡೆಯುತ್ತಿರುವ ವೇವ್ಸ್ ೨೦೨೫ ಕಾರ್ಯಕ್ರಮದಲ್ಲಿ ಮಾಧ್ಯಮ ಮತ್ತು ಮನರಂಜನಾ ವಲಯದ ೨೦೨೪-೨೫ರ ಅಂಕಿ-ಅಂಶಗಳ ಕೈಪಿಡಿಯನ್ನು ಬಿಡುಗಡೆ ಮಾಡಲಿದೆ. ಮಾಧ್ಯಮ ಮತ್ತು ಮನರಂಜನಾ ವಲಯದ ಬಗ್ಗೆ ಸಕಾಲಿಕ, ವಿಶ್ವಾಸಾರ್ಹ, ಅಧಿಕೃತ ಮತ್ತು ಸಮಗ್ರ ದತ್ತಾಂಶದ ಅಗತ್ಯವನ್ನು ಸರ್ಕಾರ ದೃಢೀಕರಿಸುವ ಭಾಗವಾಗಿ ಈ ಕೈಪಿಡಿ ಇದೆ. ಮಾಧ್ಯಮ ಮತ್ತು ಮನರಂಜನೆಯು ಸೇವಾ ವಲಯದ ಪ್ರಮುಖ ಅಂಶವಾಗಿದ್ದು, ಇದು ದೇಶದ ಆರ್ಥಿಕತೆಯ ಬೆಳವಣಿಗೆಗೆ ಕೊಡುಗೆ ನೀಡುವ ದೊಡ್ಡ ಸಾಮರ್ಥ್ಯವನ್ನು ಹೊಂದಿದೆ ಎಂದು ಸಚಿವಾಲಯ ತಿಳಿಸಿದೆ.

<><><>

ತಕ್ಷಣದಿಂದ ಜಾರಿಗೆ ಬರುವಂತೆ ಪಾಕಿಸ್ತಾನದಿಂದ ನೇರ ಮತ್ತು ಪರೋಕ್ಷ ಆಮದನ್ನು ಭಾರತ ನಿಷೇಧಿಸಿದೆ. ಪಾಕಿಸ್ತಾನದಲ್ಲಿ ತಯಾರಾಗುವ ಅಥವಾ ಪಾಕಿಸ್ತಾನದಿಂದ ರಫ್ತು ಮಾಡಲಾಗುವ ಎಲ್ಲಾ ಸರಕುಗಳ ನೇರ ಅಥವಾ ಪರೋಕ್ಷ ಆಮದು ಅಥವಾ ಸಾಗಣೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗುವುದು ಎಂದು ವಿದೇಶಿ ವ್ಯಾಪಾರ ನಿರ್ದೇಶನಾಲಯ ಅಧಿಸೂಚನೆ ಹೊರಡಿಸಿದೆ. ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ನೀತಿಯ ಹಿತಾಸಕ್ತಿಯಿಂದ ಈ ನಿರ್ಬಂಧ ವಿಧಿಸಲಾಗಿದೆ. ಇದಕ್ಕೆ ಸಂಬಂಧಪಟ್ಟಂತೆ ಯಾವುದೇ ರೀತಿಯ ವಿನಾಯಿತಿ ನೀಡಬೇಕಾದರೆ ಸರ್ಕಾರದ ಅನುಮೋದನೆಯ ಅಗತ್ಯವಿದೆ ಎಂದು ತಿಳಿಸಲಾಗಿದೆ.

<><><>

ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ - ೨೦೨೫ರ ನಾಮ ನಿರ್ದೇಶನಕ್ಕಾಗಿ ಪೋರ್ಟಲ್ ತೆರೆಯಲಾಗಿದ್ದು, ಜುಲೈ ೩೧ರ ವರೆಗೆ ಕಾಲಾವಕಾಶ ನೀಡಲಾಗಿದೆ. ೫ ರಿಂದ ೧೮ ವರ್ಷದೊಳಗಿನ ಮಕ್ಕಳ ಅಪ್ರತಿಮ ಸಾಧನೆಗೆ ಈ ಪುರಸ್ಕಾರವನ್ನು ರಾಷ್ಟ್ರಪತಿಗಳು ನೀಡುತ್ತಾರೆ. ಸಮಾಜಸೇವೆ, ಸಾಹಸ, ಪರಿಸರ, ಕ್ರೀಡೆ, ಕಲೆ ಹಾಗೂ ಸಂಸ್ಕೃತಿ ವಿಭಾಗಗಳಲ್ಲಿ ಸಾಧನೆ ಮಾಡಿರುವ ಮಕ್ಕಳಿಗೆ ಈ ಪ್ರಶಸ್ತಿ ವಿತರಿಸಲಾಗುವುದು. ಎಲ್ಲಾ ನಾಮ ನಿರ್ದೇಶನಗಳು ಆನ್‌ಲೈನ್ ಮೂಲಕವೇ ಮಾಡಬಹುದಾಗಿದ್ದು, ಅರ್ಜಿ ಸಲ್ಲಿಸಲು ಜುಲೈ ೩೧ ಕೊನೆಯ ದಿನವಾಗಿದೆ. ಆಸಕ್ತರು **awards.gov.in** ಮೂಲಕ ಅರ್ಜಿ ಸಲ್ಲಿಸಬಹುದು.

<><><>

ಇಂದು ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ಆಚರಿಸಲಾಗುತ್ತಿದೆ. ಪತ್ರಿಕಾ ಸ್ವಾತಂತ್ರ್ಯದ ಪರವಾಗಿ ಉಪಕ್ರಮಗಳನ್ನು ಪ್ರೋತ್ಸಾಹಿಸಲು ಮತ್ತು ಅಭಿವೃದ್ಧಿಪಡಿಸಲು ಹಾಗೂ ವಿಶ್ವಾದ್ಯಂತ ಪತ್ರಿಕಾ ಸ್ವಾತಂತ್ರ್ಯದ ಸ್ಥಿತಿಯನ್ನು ನಿರ್ಣಯಿಸಲು ಈ ದಿನ ಒಂದು ಸಂದರ್ಭವಾಗಿದೆ. ಈ ವರ್ಷದ ವಿಷಯ "ಧೈರ್ಯಶಾಲಿ ಹೊಸ ಜಗತ್ತಿನಲ್ಲಿ ವರದಿ ಮಾಡುವುದು - ಪತ್ರಿಕಾ ಸ್ವಾತಂತ್ರ್ಯ ಮತ್ತು ಮಾಧ್ಯಮದ ಮೇಲೆ ಕೃತಕ ಬುದ್ಧಿಮತ್ತೆಯ ಪರಿಣಾಮ" ಎಂಬುದಾಗಿದೆ. ಬದಲಾಗುತ್ತಿರುವ ಪತ್ರಿಕೋದ್ಯಮ, ಮಾಧ್ಯಮ ಮತ್ತು ಪತ್ರಿಕಾ ಸ್ವಾತಂತ್ರ್ಯದಲ್ಲಿ ಕೃತಕ ಬುದ್ಧಿಮತ್ತೆಯ ತ್ವರಿತ ಬೆಳವಣಿಗೆ ಹಾಗೂ ಬಳಕೆಯನ್ನು ಈ ವಿಷಯ ಒತ್ತಿ ಹೇಳುತ್ತದೆ.

<><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡದ ವಿರುದ್ಧ ಗುಜರಾತ್ ಟೈಟಾನ್ಸ್ ತಂಡ ೩೮ ರನ್ ಗಳ ಜಯ ಸಾಧಿಸಿದೆ. ಗುಜರಾತ್ ನೀಡಿದ್ದ ೨೨೫ ರನ್ ಗೆಲುವಿನ ಗುರಿ ಬೆನ್ನತ್ತಿದ ಹೈದರಾಬಾದ್ ತಂಡ ೨೦ ಓವರ್ ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೮೭ ರನ್ ಗಳಿಸಲಷ್ಟೇ ಶಕ್ತವಾಗಿ ಸೋಲೊಪ್ಪಿತು. ಈ ಸೋಲಿನೊಂದಿಗೆ ಸನ್ ರೈಸರ್ಸ್ ಹೈದರಾಬಾದ್ ತಂಡ ಪ್ರಸಕ್ತ ಸಾಲಿನ ಐಪಿಎಲ್ ಟೂರ್ನಿಯಿಂದ ಹೊರಬಿದ್ದಂತಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>